## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎನ್,ಯೋಗೇಶ್, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ನೆರಳೂರು ಗ್ರಾಮ ಪಂಚಾಯತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ವಿರುದ್ಧ 1957 ರ ಕ.ನಾ.ಸೇ (ವ,ನಿ&ಮೇ) ನಿಯಮಗಳ ನಿಯಮ-12 ರಡಿ ಜಾರಿ ಮಾಡಲಾದ ದೋಷರೋಪಣಾ ಪಟ್ಟಿಯನ್ನು ರದ್ದುಪಡಿಸುವ ಬಗ್ಗೆ - ಆದೇಶ,

**ಓದಲಾಗಿದೆ:-**
1. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರ ಸಂಖ್ಯೆ:Compt/Uplok/ BCD/2136/2014/PP, :07-11-2020.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ02 ಇಎನ್ ಕ್ಯೂ 2021 ದಿ:09.06.2021
3. ಸರ್ಕಾರದ ಆದೇಶ ಸಂಖ್ಯೆ:ಗಾಅಪ/17/ ಗಾಪಂಕಾ/ 2021 ದಿನಾಂಕ: 04.06.2021.

* * * *

**ಪ್ರಸ್ತಾವನೆ:**

ಬೆಂಗಳೂರು ನಗರ ಜಿಲ್ಲೆ,ಆನೇಕಲ್ ತಾಲ್ಲೂಕು, ನೆರಳೂರು ಗ್ರಾಮ ಪಂಚಾಯತ್ ವ್ಯಾಪ್ತಿಯ ಬಳಗಾರನಹಳ್ಳಿ ಗ್ರಾಮದ ಕಾಮಗಾರಿಗಳಲ್ಲಿ ಅವ್ಯವಹಾರವೆಸಗಿ ಹಣವನ್ನು ದುರುಪಯೋಗ ಪಡಿಸಿಕೊಂಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ವ.ನಿ.ಮೇ ನಿಯಮಗಳ ನಿಯಮ-14ಎ ಅನುಸಾರ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ: 05.08.2016 ರ ವರದಿಯಲ್ಲಿ ಕೋರಿರುತ್ತಾರೆ.

1. ಶ್ರೀ ಇಸ್ಮಾಯಿಲ್ ಷರೀಫ್, ಕಿರಿಯ ಇಂಜಿನಿಯರ್
2. ಶ್ರೀ ಎನ್. ಯೋಗೇಶ್, ಗ್ರಾಮ ಪಂಚಾಯತಿ ಕಾರ್ಯದರ್ಶಿ
3. ಡಾ.ಎಂ.ವೀರಭದ್ರಪ್ಪ, ಕಾರ್ಯನಿರ್ವಾಹಕ ಅಧಿಕಾರಿ(ನಿವೃತ್ತಿ)
4. ಶ್ರೀ ವಿ.ಎಂ.ವೀರಾಂಜನ, ಪಂಚಾಯತ್ ಅಭಿವೃದ್ಧಿ ಅಧಿಕಾರಿ(ನಿವೃತ್ತಿ ) ಹಾಗೂ
5. ಶ್ರೀ ಪ್ರಸನ್ನ ಕುಮಾರ್, ಸ.ಕಾ.ಇಂ(ನಿವೃತ್ತಿ)

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ದಾಖಲೆಗಳನ್ನು ಪರಿಶೀಲಿಸಲಾಗಿ ಮೇಲೆ ತಿಳಿಸಿರುವ ಎಲ್ಲಾ ಆಪಾದಿತರುಗಳು ದಾಖಲೆಗಳ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಸ್ಪಷ್ಟವಾಗಿದ್ದು,ಯಾವುದೇ ಆರ್ಥಿಕ ನಷ್ಟದ ಕುರಿತು ಪ್ರಸ್ತಾವನೆಯಿರುವುದಿಲ್ಲ. ಈಗಾಗಲೇ ಸೇವೆಯಿಂದ ನಿವೃತ್ತಿ ಹೊಂದಿರುವ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಬೇಕಾದಲ್ಲಿ ಕೆ.ಸಿ.ಎಸ್.ಆರ್.ನಿಯಮ 214(2)(ಬಿ) ರ ಅನುಸಾರ ಘಟನೆ ನಡೆದು ನಾಲ್ಕು ವರ್ಷಗಳ ಅವಧಿಯ ಒಳಗಿದ್ದಲ್ಲಿ ಮಾತ್ರ ಅಂತಹ ಪ್ರಕರಣಗಳಲ್ಲಿ ಸರ್ಕಾರದ ಮಂಜೂರಾತಿ ನೀಡಿ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಅವಕಾಶವಿದೆ. ಆದರೆ ಪ್ರಸಕ್ತ ಪ್ರಕರಣದಲ್ಲಿ ಕಾಮಗಾರಿಯು 2014 ಕ್ಕೂ ಮೊದಲೇ ನಡೆದಿದ್ದು, ಈಗಾಗಲೇ ಆರು ವರ್ಷಗಳಿಗೂ ಹೆಚ್ಚಿನ ಅವಧಿ ಗತಿಸಿರುವುದರಿಂದ ಈಗಾಗಲೇ ಸೇವೆಯಿಂದ ನಿವೃತ್ತಿ ಹೊಂದಿರುವ 1) ಶ್ರೀ ಎಂ.ವೀರಭದ್ರಪ್ಪ, ಕಾರ್ಯನಿರ್ವಾಹಕ ಅಧಿಕಾರಿ 2) ಶ್ರೀ ಎ.ಎಂ.ವೀರಾಂಜನ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹಾಗೂ 3) ಶ್ರೀ ಪ್ರಸನ್ನಕುಮಾರ್, ಸ.ಕಾ.ಇಂ ಇವರುಗಳಿಗೆ ಕೆ.ಸಿ.ಎಸ್.ಆರ್ ನಿಯಮ 214 ರ ಅನುಸಾರ ವ.ನಿ.ಮೇ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಮಂಜೂರಾತಿ ನೀಡಲು ಹಾಗೂ ಇಲಾಖಾ ವಿಚಾರಣೆ ಕೈಗೊಳ್ಳಲು ಅವಕಾಶವಿರುವುದಿಲ್ಲ ಹಾಗಾಗಿ ಈ ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರುಗಳ ಪೈಕಿ ಸೇವೆಯಲ್ಲಿರುವ ಶ್ರೀ ಇಸ್ಮಾಯಿಲ್ ಷರೀಫ್, ಕಿರಿಯ ಇಂಜಿನಿಯರ್ ಹಾಗೂ ಶ್ರೀ ಎನ್, ಯೋಗೇಶ್, ಕಾರ್ಯದರ್ಶಿ.ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಇವರುಗಳ ವಿರುದ್ಧದ ಆರೋಪಗಳ ಕುರಿತಂತೆ ಸರ್ಕಾರದ ಹಂತದಲ್ಲಿ ಇಲಾಖಾ ವಿಚಾರಣೆ ಜರುಗಿಸಲು ನಿರ್ಣಯಿಸಿ ಕ.ನಾ.ಸೇ (ವ,ನಿ&ಮೇ) ನಿಯಮಗಳ 1957ರ ನಿಯಮ-12 ರಡಿ ಕಾರಣ ಕೇಳುವ ನೋಟಿಸ್ ನೊಂದಿಗೆ ದೋಷರೋಪಣಾ ಪಟ್ಟಿಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ದಿನಾಂಕ:09.06.2021 ರಂದು ಜಾರಿ ಮಾಡಲಾಗಿರುತ್ತದೆ.

..2

ಆದರೆ ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾ.ಅ.ಪಂ.ರಾಜ್ ಇಲಾಖೆಯ ಗ್ರಾಮ ಪಂಚಾಯತಿ ಶಾಖೆಯು ಶ್ರೀ ಎನ್. ಯೋಗೇಶ್, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರಡಿ ಪ್ರಕರಣವನ್ನು ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ದಿನಾಂಕ:09.06.2021 ರ ಆದೇಶದಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿರುತ್ತದೆ.

ಒಂದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಅಪಾದಿತರ ವಿರುದ್ಧ ಎರಡು ಸಂಸ್ಥೆಗಳು ಇಲಾಖಾ ವಿಚಾರಣೆಯನ್ನು ನಡೆಸಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.ಆದ್ದರಿಂದ ಸರ್ಕಾರದಿಂದ ಕ.ನಾ.ಸೇ (ವ.ನಿ.ಮೇ) ನಿಯಮಗಳು ನಿಯಮ-12 ರಡಿ ದಿನಾಂಕ:09.06.2021 ರಂದು ಕಾರಣ ಕೇಳುವ ನೋಟಿಸ್ ಜೊತೆಗೆ ಜಾರಿ ಮಾಡಲಾದ ದೋಷರೋಪಣಾ ಪಟ್ಟಿಯನ್ನು ಶ್ರೀ ಎನ್.ಯೋಗೇಶ್, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರಿಗೆ ಸೀಮಿತವಾಗಿ ರದ್ದುಪಡಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ಇಎನ್ ಕ್ಯೂ 2021,</u>
<u>ಬೆಂಗಳೂರು, ದಿನಾಂಕ :29.01.2022</u>

ಪ್ರಸ್ತಾವನೆಗಳಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ,ಶ್ರೀ ಎನ್. ಯೋಗೇಶ್, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ನೆರಳೂರು ಗ್ರಾಮ ಪಂಚಾಯತಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಉದ್ದೇಶಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ,ನಿಯಂತ್ರಣ ಹಾಗೂ ಅಪೀಲುಗಳು) ನಿಯಮಗಳು 1957 ರ ನಿಯಮ-12ರಡಿ ದಿನಾಂಕ:09.06.2021ರಂದು ಜಾರಿ ಮಾಡಲಾಗಿದ್ದ ದೋಷರೋಪಣಾ ಪಟ್ಟಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಅನುಸಾರ
ಮತ್ತು ಅವರ ಹೆಸರಿನಲ್ಲಿ

29/1/22

(ಕೆ.ನದೀಮ್ ಅಹ್ಮದ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1.ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2.ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3.ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4.ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ .
6.ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು
7.ಸಂಬಂಧಪಟ್ಟ ನೌಕರರಿಗೆ–(ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಅನೇಕಲ್ - ಇವರು ಆದೇಶದ ಪ್ರತಿಯನ್ನು ನೌಕರರಿಗೆ ಜಾರಿ ಮಾಡಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ).

ಪ್ರತಿ ಮಾಹಿತಿಗಾಗಿ:

1.ಮಾನ್ಯ ಗ್ರಾ.ಅ.ಪಂ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
2.ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3.ಸರ್ಕಾರದ ಜಂಟಿ ಕಾರ್ಯದರ್ಶಿಗಳು, (ಆಡಳಿತ-1) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಶಾಖೆ
4.ಶಾಖಾ ರಕ್ಷಾ ಕಡತ / ವೆಬ್ ಸೈಟ್ ನಲ್ಲಿ ಪ್ರಕಟಿಸಲು.